ಈ. ಕರ್ನಾಟಕ ಪಮಚಾಯತ್‌ರಾಜ್ ಕಾಯ್ದೆಗೆ ಸರ್ಕಾರವು ಅಧಿಸೂಚನೆ ಸಂಖ್ಯೆ SAMVYASHAE 33 SHASANA 2002 ದಿನಾಂಕ 22.9.2003ರಲ್ಲಿ ತಿದ್ದುಪಡಿಯನ್ನು ಮಾಡಿದ್ದು ಸದರಿ ತಿದ್ದುಪಡಿಯ ಪ್ರಕಾರ ಆಶ್ರಯ ಮತ್ತು ಅಂಬೇಡ್ಕರ್ ವಸತಿ ಯೋಜನೆಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಕಾರ್ಯವು ಗ್ರಾಮ ಪಂಚಾಯಿತಿಗಳ ಕಾರ್ಯ ವ್ಯಾಪ್ತಿಯಲ್ಲಿ ಬರುತ್ತದೆ. ಸದರಿ ಕಾಯ್ದೆಯಡಿಯಲ್ಲಿ ನಿಯಮಾನುಸಾರ ಆಯ್ದೆ ಮಾಡಿದ ಪಟ್ಟಿಯು ಅಂತಿಮ ಪಟ್ಟಿಯಾಗಿರುತ್ತದೆ. ಆದ್ದರಿಂದ 2004–05 ರಿಂದ ಆಶ್ರಯ ಸಮಿತಿಗಳನ್ನು ರಚಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

3731 (4064) ಶ್ರೀ ಕೃಷ್ಣಪ್ಪ ಎಂ.ಟಿ. (ಶುರುವೇಕೆರೆ)

ದಾ.ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ತುರುವೇಕರೆ ತಾಲ್ಲೂಕಿನಲ್ಲಿ ಹೊಸ ಆಸ್ಪತ್ರೆಯನ್ನು ತೆರೆಯಲು ಮನವಿ ಸಲ್ಲಿಸಿರುವುದು ನಿಜವೇ;

ಆ. ತುರುವೇಕೆರೆ ಪಟ್ಟಣದ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಕೋರಿದ್ದು, ಇದರ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು?

ದಾ.ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ. ಇಲ್ಲ.

ಆ. ಮಾರ್ಗಸೂಚಿಪ್ರಕಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

3732 (3910) ಶ್ರೀ ಲಾಲಾಜಿ ಆರ್ ಮೆಂಡನ್ (ಕಾಪು)

ಶ್ರೀ ಅಂಜನಮೂರ್ತಿ (ವಸತಿ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಸರ್ಕಾರದ ವತಿಯಿಂದ ವಸತಿರಹಿತರಿಗೆ ನೀಡುವ ಮನೆಗಳನ್ನು ಸರ್ಕಾರ ಸೂಚಿಸಿದ ಮಾರ್ಗಸೂಚಿಯಂತೆ ನೀಡುವ ಅಧಿಕಾರ ಶಾಸಕರಿಗೆ ಇದೆಯೇ;

ಆ. ಇದ್ದಲ್ಲಿ, ಯಾವ ಯಾವ ವರ್ಗಕ್ಕೆ ಎಷ್ಟು ಎಂದು ಮೀಸಲಾತಿಗೆ ಅನುಗುಣವಾಗಿ ಶಾಸಕರು ಶಿಫಾರಸ್ಸು ಮಾಡಬಹುದಾಗಿದೆಯೇ;

ಇ. ಗ್ರಾಮಪಂಚಾಯಿತಿ ಗ್ರಾಮಸಭೆಯ ನಡುವಳಿಕೆಯಲ್ಲಿ ತಯಾರಿಸಲಾದ ವಸತಿರಹಿತರ ಪಟ್ಟಿಯನ್ನು ಅಂತಿಮಗೊಳಿಸಲು ಶಾಸಕರುಗಳಿಗೆ ಅಧಿಕಾರ ನೀಡಲು ಸರ್ಕಾರ ಆದೇಶಿಸಿರುವುದೇ;

ಈ. ಹಾಗಿದ್ದಲ್ಲಿ ಎಂದಿನಿಂದ ಈ ಆದೇಶ ಜಾರಿಗೆ ಬರುತ್ತದೆ?

ಶ್ರೀ ಅಂಜನಮೂರ್ತಿ (ವಸತಿ ಸಚಿವರು)

ಅ. ಇಲ್ಲ.

ಆ. ಉದ್ಭವಿಸುವುದಿಲ್ಲ.

ಇ. ಇಲ್ಲ.

ಈ. ಉದ್ಭವಿಸುವುದಿಲ್ಲ.

3733 (3911) ಶ್ರೀ ಲಾಲಾಜಿ ಆರ್. ಮೆಂಡನ್ (ಕಾಪು)
ಡಾ॥ಹೆಚ್.ಸಿ. ಮಹಾದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಕಾಪು ವಿಧಾನಸಭಾ ಕ್ಷೇತ್ರದ ಬೆಳ್ಮಣ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೂಡ ಗ್ರಾಮದಲ್ಲಿನ ಒಡಮಾರು ಎಂಬಲ್ಲಿ ಕಳೆದ 10 ವರ್ಷಗಳಿಂದ ಒಂದು ಜನಸಂಪರ್ಕ ಸೇತುವೆ ಕೆಲಸ ಪೂರ್ಣಗೊಂಡಿಲ್ಲದಿರುವುದರಿಂದ ಜನಸಾಮಾನ್ಯರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ, ಈ ಕಾಮಾರಿ ಕೆಲಸ ಯಾವ ಹಂತದಲ್ಲಿದೆ;

ಇ. ಈ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣವಾಗಿ ಮುಗಿಸಲು ಎಷ್ಟು ಸಮಯ ಬೇಕಾಗುವುದು; ಆದಷ್ಟು ಬೇಗ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದೇ; ಈ ಸಂಬಂದವಾಗಿ ಪೂರ್ಣವಾದ ವಿವರಗಳನ್ನು ನಿಡುವುದು.

ಡಾ॥ಹೆಚ್.ಸಿ. ಮಹಾದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಸಚಿವರು)

ಅ. ಹೌದು.

ಆ. 80 ಮೀ. ಉದ್ದದ ಸೇತುವೆ ಕಾಮಗಾರಿಯನ್ನು ಅಂದಾಜು ಮೊತ್ತ ರೂ. 17.00 ಲಕ್ಷಗಳಲ್ಲಿ ಪ್ರಾರಂಭಿಸಿ, ಬಹುತೇಕ ಪೂರ್ಣಗೊಳಿಸಲಾಗಿದ್ದು, ಇನ್ನು 10 ಮೀ. ಸ್ಪ್ಯಾನಿನ ಒಂದು ಡೆಕ್ ಸ್ಲಾಬ್ ಕೆಲಸ ಪೂರ್ಣಗೊಳಿಸಬೇಕಾಗಿದೆ.

ಇ. ಬಾಕಿ ಇರುವ 10 ಮೀಟರ್ ಸ್ಪ್ಯಾನಿನ ಡೆಕ್ ಸ್ಲಾಬ್ ಕೆಲಸಕ್ಕೆ ರೂ.5.00 ಲಕ್ಷಗಳ ಅನುದಾನ ಅಗತ್ಯವಿದ್ದು, ಅನುದಾನ ಲಭ್ಯತೆಗನುಗುಣವಾಗಿ ಈ ವರ್ಷದ ಕ್ರಿಯಾ ಯೋಜನೆಯಲ್ಲಿ ಅಳವಡಿಸಿಕೊಂಡು ಅಪೂರ್ಣವಾದ ಕೆಲಸವನ್ನು ಪೂರ್ಣಗೊಳಿಸಲು ಜಿಲ್ಲಾ ಪಂಚಾಯಿತಿಗೆ ಸೂಚಿಸಲಾಗುವುದು.